ಆ) ಬಂದಿದ್ದಲ್ಲಿ, ಸರ್ಕಾರವು ಯಾವ ಕ್ರಮ ಕೈಗೊಂಡಿರುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಇಲಾಖೆಯಿಂದ 2009–10ನೇ ಸಾಲಿಗೆ ಈ ಕೆಳಕಂಡ ಯೋಜನೆಗಳಡಿ ಅನುದಾನವನ್ನು ಒದಗಿಸಿದೆ.

1) ಪ್ರೌಢಶಾಲಾ ಅಭಿವೃದ್ಧಿ ಯೋಜನೆಯಡಿ ಹೊಸ ಪ್ರೌಢಶಾಲಾ ಕಟ್ಟಡಗಳ ನಿರ್ಮಾಣಕ್ಕಾಗಿ 40 ಕೊಠಡಿಗಳಿಗೆ ರೂ. 200.00 ಲಕ್ಷ

2) ಪ್ರೌಢಶಾಲಾ ಕಟ್ಟಡಗಳ ನಿರ್ಮಾಣಕ್ಕಾಗಿ 59 ಕೊಠಡಿಗಳಿಗೆ ರೂ. 300.00 ಲಕ್ಷ

3) ನಗರ ಪ್ರದೇಶದ ಸರ್ಕಾರಿ ಪ್ರೌಢಶಾಲೆಗಳ ಕೊಠಡಿಗಳ ನಿರ್ಮಾಣಕ್ಕಾಗಿ 149 ಕೊಠಡಿಗಳಿಗೆ ರೂ. 794.34 ಲಕ್ಷ.

4) ಪಂಚಸೌಲಭ್ಯ ಯೋಜನೆಯಡಿ ನಗರ ಪ್ರದೇಶದ ಸರ್ಕಾರಿ ಪ್ರೌಢಶಾಲೆಗಳಿಗೆ ಶೌಚಾಲಯ ವ್ಯವಸ್ಥೆ ಕಲ್ಪಿಸಲು 49 ಶಾಲೆಗಳಿಗೆ ರೂ. 74.97ಲಕ್ಷ.

5) ಪಂಚಸೌಲಭ್ಯ ಯೋಜನೆಯಡಿ ನಗರ ಪ್ರದೇಶದ ಸರ್ಕಾರಿ ಪ್ರೌಢ ಶಾಲೆಗಳಿಗೆ ಪೀಠೋಪಕರಣಗಳ ವ್ಯವಸ್ಥೆ ಕಲ್ಪಿಸಲು ರೂ. 49.98 ಲಕ್ಷ.

6) ವಿಶೇಷ ಅಭಿವೃದ್ಧಿ ಯೋಜನೆಯಡಿ ಕುಡಿಯುವ ನೀರು ಮತ್ತು ಶೌಚಾಲಯ ಒದಗಿಸಲು 329 ಶಾಲೆಗಳಿಗೆ ರೂ. 1664.74ಲಕ್ಷ.

7) ವಿಶೇಷ ಅಭಿವೃದ್ಧಿ ಯೋಜನೆಯಡಿ ರಾಜ್ಯದ ಅತ್ಯಂತ ಹಿಂದುಳಿದ ಪ್ರದೇಶದ ಸರ್ಕಾರಿ ಪ್ರೌಢಶಾಲೆಗಳಿಗೆ ಕೊಠಡಿ ನಿರ್ಮಾಣ ಮಾಡಲು 921 ಕೊಠಡಿಗಳಿಗೆ ರೂ. 4998.12 ಲಕ್ಷ.

ರಾಜ್ಯದಲ್ಲಿ ಉದ್ಯೋಗ ಖಾತ್ರಿ ಯೋಜನೆಯ ಸೌಲಭ್ಯ

305 (579) ಶ್ರೀ ಲಾಲಾಜಿ ಆರ್.ಮೆಂಡನ್ (ಕಾಪು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಪಂಚಾಯತಿಗಳು ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸೌಲಭ್ಯಗಳನ್ನು ಪಡೆದಿದೆ;

ಆ) ಉಡುಪಿ ಜಿಲ್ಲೆಯಲ್ಲಿ ಎಷ್ಟು ಪಂಚಾಯತಿಗಳು ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಸೌಲಭ್ಯ ಪಡೆದಿವೆ;

ಇ) ಕಾಪು ಮತ ಕ್ಷೇತ್ರದಲ್ಲಿ ಒಟ್ಟು ಎಷ್ಟು ಪಂಚಾಯತಿಗಳು ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಬರುತ್ತದೆ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ರಾಜ್ಯದ ಎಲ್ಲಾ ಜಿಲ್ಲೆಗಳ 5628 ಗ್ರಾಮ ಪಂಚಾಯತಿಗಳಿಗೆ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸೌಲಭ್ಯಗಳನ್ನು ಒದಗಿಸಲಾಗಿದೆ.

ಆ) ಉಡುಪಿ ಜಿಲ್ಲೆಯ ಎಲ್ಲಾ 146 ಗ್ರಾಮ ಪಂಚಾಯತಿಗಳಿಗೆ ಉದ್ಯೋಗ ಖಾತರಿ ಯೋಜನೆಯಡಿ ಸೌಲಭ್ಯಗಳನ್ನು ಒದಗಿಸಲಾಗಿದೆ.

ಇ) ಉದ್ಯೋಗ ಖಾತರಿ ಯೋಜನೆಯಡಿ ಕಾಪು ಮತ ಕ್ಷೇತ್ರದಲ್ಲಿ ಒಟ್ಟು 29 ಗ್ರಾಮ ಪಂಚಾಯತಿಗಳು ಬರುತ್ತದೆ.

ಹಾಸನ ಜಿಲ್ಲೆಯಲ್ಲಿರುವ ಹಾಲು ಉತ್ಪಾದಕರ ಸಂಘಗಳ ಬಗ್ಗೆ

307 (03) ಶ್ರೀ ಮಂಜು.ಎ (ಅರಕಲಗೂಡು) : ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯಲ್ಲಿ ಒಟ್ಟು ಹಾಲು ಉತ್ಪಾದಕರ ಸಂಘಗಳೆಷ್ಟು;

ಆ) ಅರಕಲಗೂಡು ಮತಕ್ಷೇತ್ರದಲ್ಲಿ ಒಟ್ಟು ಎಷ್ಟು ಹಾಲು ಉತ್ಪಾದಕರ ಸಂಘಗಳಿವೆ;

ಇ) ಹಾಲು ಉತ್ಪಾದಕರ ಸಂಘಗಳು ಹೊಸದಾಗಿ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ ಅರಕಲಗೂಡು ಕ್ಷೇತ್ರದಲ್ಲಿ ಹೊಸ ಸಂಘಗಳ ವಿವರ ನೀಡುವುದು;

ಈ) ಇನ್ನು ಎಷ್ಟು ಹಾಲು ಉತ್ಪಾದಕರ ಹೊಸ ಸಂಘಗಳು ಪ್ರಾರಂಭಿಸಲಾಗುವುದು;